Akashvani : Bangalore
Regional Bulletin In Kannada
28.03.2026 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
<><*<><>*><>

ಮುಖ್ಯಾಂಶಗಳು

೧. ಮಾದಕದ್ರವ್ಯ ಮಾರಾಟ ಜಾಲದ ವಿರುದ್ಧ ಸರ್ಕಾರದ ಕಠಿಣ ಕ್ರಮ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ನಾಳೆ ಮನ್ ಕಿ ಬಾತ್ ೧೩೨ನೇ ಆವೃತ್ತಿ ; ಪ್ರಧಾನಿ ನರೇಂದ್ರ ಮೋದಿ ಅವರ ಮನದ ಮಾತು

೩. ಐಪಿಎಲ್ ಟಿ-೨೦ ಕ್ರಿಕೆಟ್ ; ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಉದ್ಘಾಟನಾ ಪಂದ್ಯಕ್ಕೆ ಕ್ಷಣಗಣನೆ ; ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಣಾಹಣಿ

೪. ತುಮಕೂರಿನಲ್ಲಿ ಮೇ ೩ರಿಂದ ೧೦ರವರೆಗೆ ಅಂತಾರಾಷ್ಟ್ರೀಯ ಮಹಿಳಾ ಮುಕ್ತ ಟೆನಿಸ್ ಚಾಂಪಿಯನ್‌ಶಿಪ್ ಆಯೋಜನೆ

<><*<><>*><>

ರಾಜ್ಯ ಸರ್ಕಾರ ಮಾದಕದ್ರವ್ಯ ಮಾರಾಟ ಜಾಲದ ವಿರುದ್ಧ ಸಮರ ಸಾರಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಅವರು ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯವನ್ನು ಮಾದಕದ್ರವ್ಯ ಮುಕ್ತಗೊಳಿಸುವುದು ಸರ್ಕಾರದ ಉದ್ದೇಶವಾಗಿದೆ. ಮೈಸೂರಿನಲ್ಲಿ ಮಾದಕದ್ರವ್ಯ ಜಾಲ ಪತ್ತೆ ಹಚ್ಚಿರುವ ಬಗ್ಗೆ ತಿಳಿದುಬಂದಿದ್ದು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು. ಈ ವರ್ಷದಿಂದಲೇ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ತೃತೀಯ ಭಾಷೆ ಹಿಂದಿಯನ್ನು ಪರಿಗಣಿಸದಿರಲು ತೀರ್ಮಾನ ಕೈಗೊಳ್ಳಲಾಗಿದೆ. ಹಿಂದಿ ಭಾಷೆ ಕಲಿಕೆಗೆ ಸರ್ಕಾರದ ವಿರೋಧವಿಲ್ಲ, ಆದರೆ ಪರೀಕ್ಷೆಯ ಅಂಕಗಳಿಗೆ ಕಡ್ಡಾಯವಾಗಬಾರದು ಎಂದರು.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೨ನೇ ಸಂಚಿಕೆಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ

ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

<><*<><>*><>

ಬೆಂಗಳೂರು ಉತ್ತರ ನಗರ ಪಾಲಿಕೆಯ ೨೦೨೬-೨೭ನೇ ಸಾಲಿನ ಆಯವ್ಯಯದಲ್ಲಿ ಸುಮಾರು ೮೨೬ ಕೋಟಿ ರೂಪಾಯಿ ಆಸ್ತಿ ತೆರಿಗೆ ಹಾಗೂ ಎ ಖಾತಾ ಆಸ್ತಿ ಪರಿವರ್ತನಾ ಪ್ರಕ್ರಿಯೆಯಿಂದ ೬೮೦ ಕೋಟಿ ರೂಪಾಯಿ ಆದಾಯ ನಿರೀಕ್ಷಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಹೊಸ ಜಾಹಿರಾತು ನಿಯಮಗಳ ಅನುಷ್ಠಾನದಿಂದ ಸುಮಾರು ೧೦೮ ಕೋಟಿ ರೂಪಾಯಿ ಆದಾಯ ಸಂಗ್ರಹಿಸುವ ನಿರೀಕ್ಷೆಯಿದೆ. ಬೆಂಗಳೂರು ಉತ್ತರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕೆರೆಗಳನ್ನು ಅಭಿವೃದ್ಧಿಪಡಿಸಲು ೪೦ ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿದೆ. ವಸತಿ ಯೋಜನೆಗೆ ಸುಮಾರು ೭೧ ಕೋಟಿ ರೂಪಾಯಿ ನಿಗದಿಪಡಿಸಲಾಗಿದೆ. ಬಜೆಟ್‌ನಲ್ಲಿ ರಸ್ತೆ, ಚರಂಡಿ ವ್ಯವಸ್ಥೆ, ಕೆರೆಗಳ ಅಭಿವೃದ್ಧಿ, ಶೈಕ್ಷಣಿಕ ಅಭಿವೃದ್ಧಿ, ಗ್ರಂಥಾಲಯಗಳ ಉನ್ನತೀಕರಣ ಸೇರಿದಂತೆ ಸರ್ವಾಂಗೀಣ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

<><*<><>*><>

ಉಪಚುನಾವಣೆ ನಡೆಯಲಿರುವ ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಮತದಾನ ಜಾಗೃತಿ ಚಟುವಟಿಕೆಗಳು ಭರದಿಂದ ಸಾಗಿವೆ. ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಬೇವಿನಮಟ್ಟಿ ಗ್ರಾಮದಲ್ಲಿ ಮುಂಬತ್ತಿ ಬೆಳಕಿನಲ್ಲಿ ಭಾರತ ನಕ್ಷೆ ಅರಳಿಸುವ ಮೂಲಕ ಮತದಾನ ಜಾಗೃತಿ ಅಭಿಯಾನ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಂಗಪ್ಪ ಅವರು, ಮತದಾನ ಪ್ರಕ್ರಿಯೆ ಪ್ರಜಾಪ್ರಭುತ್ವದ ಹಬ್ಬವಾಗಿದ್ದು, ಪ್ರತಿಯೊಬ್ಬ ಅರ್ಹ ಮತದಾರರು ಏಪ್ರಿಲ್ ೯ ರಂದು ತಪ್ಪದೇ ಮತಗಟ್ಟೆಗೆ ತೆರಳಿ ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದು ಕರೆ ನೀಡಿದರು. ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶಶಿಧರ್ ಕುರೇರ ಅವರು ಮತದಾರರಿಗೆ ಪ್ರತಿಜ್ಞಾವಿಧಿ ಬೋಧಿಸಿ, ಕುಟುಂಬದವರಿಗೂ ಮತದಾನದ ಮಹತ್ವ ತಿಳಿಸಿ, ಎಲ್ಲರೂ ಸಕ್ರಿಯವಾಗಿ ಭಾಗವಹಿಸುವಂತೆ ಮನವಿ ಮಾಡಿದರು. ಇದೇ ವೇಳೆ ಅಧಿಕಾರಿಗಳು ಮತದಾನದ ಮಹತ್ವವನ್ನು ವಿವರಿಸಿ, ಈ ಉಪಚುನಾವಣೆಯಲ್ಲಿ ಶೇಕಡ ೧೦೦ರಷ್ಟು ಮತದಾನವಾಗುವಂತೆ ವಿನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಂಗವಾಗಿ ರಂಗೋಲಿಯಲ್ಲಿ ಭಾರತ ನಕ್ಷೆ ಚಿತ್ರಿಸಿ, "ನಮ್ಮ ಮತ ಮಾರಾಟಕ್ಕಿಲ್ಲ" ಎಂಬ ಸಂದೇಶದ ಮೂಲಕ ಮತದಾನದ ಮಹತ್ವ ಸಾರಲಾಯಿತು.

<><*<><>*><>

ಸುಮಾರು ೧೨೦ ಕೋಟಿ ರೂಪಾಯಿ ವೆಚ್ಚದಲ್ಲಿ ಮೈಸೂರಿನಲ್ಲಿ ನಿರ್ಮಾಣ ವಾಗುತ್ತಿರುವ ಹೊಸ ಬಸ್ ನಿಲ್ದಾಣ ಕಾಮಗಾರಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ ಮಹದೇವಪ್ಪ ಇಂದು ಪರಿಶೀಲಿಸಿದರು. ಶೇಕಡ ೩೦ ರಷ್ಟು ಕಾಮಗಾರಿ ಪೂರ್ಣಗೊಂಡಿದ್ದು, ಮುಂದಿನ ವರ್ಷದ ಮಾರ್ಚ್ ಒಳಗಾಗಿ ಕಾಮಗಾರಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಬನ್ನಿಮಂಟಪದ ರಸ್ತೆಯಲ್ಲಿ, ಬಸ್‌ಗಳು ನಿಲ್ದಾಣದ ಒಳಗೆ ಹಾಗೂ ಹೊರ ಭಾಗಕ್ಕೆ ಹೋಗಲು ಪ್ರತ್ಯೇಕ ೧೦೦ ಅಡಿ

ರಸ್ತೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಯೋಜನೆ ಸಿದ್ಧಪಡಿಸಿ ಪ್ರಸ್ತಾವನೆ ಸಲ್ಲಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

<><*<><>*><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಟಿ-೨೦ ಕ್ರಿಕೆಟ್‌ನ ೧೯ನೇ ಆವೃತ್ತಿಯ ಉದ್ಘಾಟನಾ ಪಂದ್ಯಕ್ಕೆ ಕ್ಷಣಗಣನೆ ಆರಂಭವಾಗಿದೆ. ಉದ್ಘಾಟನಾ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಆ ಮೂಲಕ ಮೇ ೩೧ರ ವರೆಗೆ ನಡೆಯಲಿರುವ ಎರಡು ತಿಂಗಳ ಅವಧಿಯ ಈ ಟೂರ್ನಿಗೆ ಇಂದು ಚಾಲನೆ ದೊರಕಲಿದೆ. ಕಳೆದ ಆವೃತ್ತಿಯ ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆ ವೇಳೆ ಮೃತಪಟ್ಟ ೧೧ ಕ್ರೀಡಾ ಪ್ರೇಮಿಗಳ ಗೌರವಾರ್ಥ ಸೂಚಕವಾಗಿ ಭಾರತೀಯ ಕ್ರಿಕೆಟ್ ಮಂಡಳಿ - ಬಿಸಿಸಿಐ ಸಾಂಪ್ರದಾಯಿಕ ಅದ್ದೂರಿ ಉದ್ಘಾಟನಾ ಸಮಾರಂಭ ನಡೆಸದಿರಲು ತೀರ್ಮಾನಿಸಿದೆ. ಮೃತಪಟ್ಟ ಕ್ರೀಡಾಪ್ರೇಮಿಗಳ ಗೌರವಾರ್ಥ ಚಿನ್ನಸ್ವಾಮಿ ಕ್ರೀಡಾಂಗಣದ ೧೧ ಸೀಟುಗಳನ್ನು ಕಾಯ್ದಿರಿಸಲು ನಿರ್ಧರಿಸಲಾಗಿದೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಆಟಗಾರರು ೧೧ ಸಂಖ್ಯೆಯ ಜರ್ಸಿ ಧರಿಸಿ ಗೌರವ ಸಲ್ಲಿಸಲಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಬೆಂಗಳೂರಿನಲ್ಲಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ. ಸಾರ್ವಜನಿಕರು ಮೆಟ್ರೋ ಮತ್ತು ಬಿಎಂಟಿಸಿ ಸಾರಿಗೆ ವ್ಯವಸ್ಥೆಯನ್ನು ಬಳಸುವಂತೆ ಪೊಲೀಸರು ಮನವಿ ಮಾಡಿದ್ದಾರೆ. ಕ್ರೀಡಾಂಗಣದ ಪ್ರವೇಶ ಹಾಗೂ ನಿರ್ಗಮನ ದ್ವಾರಗಳ ಸಂಖ್ಯೆಯನ್ನು ದ್ವಿಗುಣಗೊಳಿಸಲಾಗಿದ್ದು, ಈ ಬಾರಿ ೨೨ರಿಂದ ೪೫ ದ್ವಾರಗಳನ್ನು ತೆರೆಯಲಾಗಿದೆ. ಪ್ರೇಕ್ಷಕರು ಟಿಕೆಟ್‌ನಲ್ಲಿ ನೀಡಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ. ಚಿನ್ನಸ್ವಾಮಿ ಕ್ರೀಡಾಂಗಣದ ಸುತ್ತಮುತ್ತ ನೋ ಪಾರ್ಕಿಂಗ್ ಇರಲಿದ್ದು, ಬೇರೆಡೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಆರ್‌ಸಿಬಿ, ನಾಯಕ ರಜತ್ ಪಾಟೀದಾರ್ ಸಾರಥ್ಯದಲ್ಲಿ ಕಣಕ್ಕಿಳಿಯುತ್ತಿದ್ದರೆ, ಸನ್‌ರೈಸರ್ಸ್ ಹೈದರಾಬಾದ್ ತಂಡವನ್ನು ಇಶಾನ್ ಕಿಶನ್ ಮುನ್ನಡೆಸಲಿದ್ದಾರೆ.  ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದ ಹಿನ್ನೆಲೆಯಲ್ಲಿ ಪ್ರಯಾಣಿಕರಿಗೆ ಸುಲಭ ಹಾಗೂ ಸುರಕ್ಷಿತ ಪ್ರಯಾಣಕ್ಕೆ ಅನುಕೂಲವಾಗುವಂತೆ ಮೆಟ್ರೋ ರೈಲು ಸೇವಾ ಅವಧಿಯನ್ನು ಬಿಎಂಆರ್‌ಸಿಎಲ್ ವಿಸ್ತರಿಸಿದೆ. ಇಂದು ಎಲ್ಲಾ ಟರ್ಮಿನಲ್ ನಿಲ್ದಾಣಗಳಿಂದ ಕೊನೆಯ ಮೆಟ್ರೋ ಸೇವೆಯನ್ನು ರಾತ್ರಿ ೧೧ ಗಂಟೆಯಿಂದ ಭಾನುವಾರ ಮುಂಜಾನೆ ೨ ಗಂಟೆಯವರೆಗೆ ವಿಸ್ತರಿಸಲಾಗಿದೆ.

<><*<><>*><>

ರಾಮನಗರದ ಇತಿಹಾಸ ಪ್ರಸಿದ್ಧ ಶ್ರೀರಾಮದೇವರ ಬ್ರಹ್ಮ ರಥೋತ್ಸವ ಕಾರ್ಯಕ್ರಮ ಇಂದು ನಡೆಯಿತು. ಕಾರ್ಯಕ್ರಮದಲ್ಲಿ ಲೋಕಸಭಾ ಸದಸ್ಯ ಡಾ.ಸಿ.ಎನ್.ಮಂಜುನಾಥ್ ಪಾಲ್ಗೊಂಡು ರಾಮ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಅವರು, “ಶ್ರೀ ರಾಮನ ಆದರ್ಶಗಳು ನಮ್ಮ ಜೀವನಕ್ಕೆ ದಾರಿ ತೋರಿಸುವ ಬೆಳಕಾಗಿವೆ. ಸಮಾಜದಲ್ಲಿ ಏಕತೆ, ಶಾಂತಿ ಮತ್ತು ಸಹಕಾರ ಹೆಚ್ಚಾಗಲಿ. ಸರ್ವರಿಗೂ ಆರೋಗ್ಯ, ಐಶ್ವರ್ಯ ಮತ್ತು ಒಳಿತು ದೊರಕಲಿ” ಎಂದು ಆಶಯ ವ್ಯಕ್ತಪಡಿಸಿದರು.

<><*<><>*><>

ಉಪ ಲೋಕಾಯುಕ್ತ ಕೆ.ಎನ್.ಫಣೀಂದ್ರ ಏಪ್ರಿಲ್ ೧ರಂದು ಚಿಕ್ಕಬಳ್ಳಾಪುರ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಚಿಕ್ಕಬಳ್ಳಾಪುರ, ಗುಡಿಬಂಡೆ, ಗೌರಿಬಿದನೂರು ಮತ್ತು ಮಂಚೇನಹಳ್ಳಿ ತಾಲ್ಲೂಕುಗಳಿಗೆ ಸಂಬಂಧಪಟ್ಟಂತೆ ಲೋಕಾಯುಕ್ತದಲ್ಲಿ ದಾಖಲಾಗಿ ತನಿಖೆಗೆ ಬಾಕಿ ಇರುವ ದೂರು ಪ್ರಕರಣಗಳ ವಿಚಾರಣೆಯನ್ನು ನಡೆಸಲಿದ್ದಾರೆ. ಈ ವಿಚಾರಣೆ ಜಿಲ್ಲಾ ಪಂಚಾಯತ್ ನ ಸರ್.ಎಂ.ವಿ ಸಭಾಂಗಣದಲ್ಲಿ ನಡೆಯಲಿದ್ದು, ಸದರಿ ಪ್ರಕರಣಗಳ ಎಲ್ಲಾ ಕಕ್ಷಿದಾರರು ಮತ್ತು ಇಲಾಖೆಗಳ ಅಧಿಕಾರಿಗಳು ಖುದ್ದು ಹಾಜರಿರಲು ಕಟ್ಟುನಿಟ್ಟಿನ ಸೂಚನೆ ನೀಡಿರುವುದಾಗಿ ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.

<><*<><>*><>

ತುಮಕೂರಿನಲ್ಲಿ ಮೇ ೩ರಿಂದ ೧೦ರವರೆಗೆ ಇದೇ ಮೊದಲ ಬಾರಿಗೆ ಅಂತಾರಾಷ್ಟ್ರೀಯ ತುಮಕೂರು ಮಹಿಳಾ ಮುಕ್ತ ಟೆನಿಸ್ ಚಾಂಪಿಯನ್‌ಶಿಪ್ ನಡೆಯಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರು ಟೆನಿಸ್ ಅಸೋಸಿಯೇಷನ್ ಕ್ರೀಡಾಂಗಣದಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಅಂತಾರಾಷ್ಟ್ರೀಯ ಗುಣಮಟ್ಟದ ಟೆನಿಸ್ ಕ್ರೀಡಾಂಗಣಗಳನ್ನು ತುಮಕೂರಿನಲ್ಲಿ ನಿರ್ಮಿಸಿದ ಬಳಿಕ ಇದೇ ಮೊದಲ ಬಾರಿಗೆ ವಿಶ್ವ ಮಟ್ಟದ ಕ್ರೀಡಾಕೂಟ ನಡೆಯುತ್ತಿದೆ. ವಿಶ್ವಾದ್ಯಂತ ೧೦೦ಕ್ಕೂ ಹೆಚ್ಚು ಕ್ರೀಡಾಪಟುಗಳು ಸುಮಾರು ೧೨ ದೇಶಗಳಿಂದ ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದಾರೆ ಎಂದರು. ಇಲ್ಲಿ ಆಡುವ ಕ್ರೀಡಾಪಟುಗಳು ವಿಜೇತರಾದಲ್ಲಿ ಹಾಗೂ ೩೦ಸಾವಿರ ಅಮೆರಿPನ್ ಡಾಲರ್ ಗಳನ್ನು ಗೆಲ್ಲಲಿದ್ದಾರೆ. ಅಲ್ಲದೆ ನಂತರದ ಸ್ಥಾನವನ್ನು ಹೊಂದುವ ಆಟಗಾರರು ಅಂತಾರಾಷ್ಟ್ರೀಯ ರ್‍ಯಾಂಕ್‌ಗಳನ್ನು ಪಡೆಯಲಿದ್ದಾರೆ ಎಂದರು. ತುಮಕೂರು ಜಿಲ್ಲಾಡಳಿತ, ತುಮಕೂರು ಟೆನಿಸ್ ಅಸೋಸಿಯೇಷನ್ ಹಾಗೂ ಕರ್ನಾಟಕ ಲಾನ್ ಟೆನಿಸ್ ಅಸೋಸಿಯೇಷನ್ ಸಹಕಾರದಲ್ಲಿ ಅಂತಾರಾಷ್ಟ್ರೀಯ ಮಹಿಳಾ ಟೆನಿಸ್ ಕ್ರೀಡಾಕೂಟ ನಡೆಯಲಿದೆ. ತುಮಕೂರು ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ಕೆಲಸ ಪ್ರಾರಂಭವಾಗಿದೆ. ಅಂತಾರಾಷ್ಟ್ರೀಯ ಹಾಕಿ ಕ್ರೀಡಾಂಗಣ ಹಾಗೂ ಅಂತಾರಾಷ್ಟ್ರೀಯ ಈಜುಕೊಳ ನಿರ್ಮಾಣಕ್ಕೆ ಈಗಾಗಲೇ ಜಾಗ ಗುರುತಿಸಲಾಗಿದೆ ಎಂದು ಅವರು ತಿಳಿಸಿದರು. ಅಂತಾರಾಷ್ಟ್ರೀಯ ಮಹಿಳಾ ಟೆನಿಸ್ ಕ್ರೀಡಾಕೂಟದ ಲಾಂಛನವನ್ನು ಸಚಿವ ಜಿ.ಪರಮೇಶ್ವರ್ ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>